# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 648

ಸದಸ್ಯರ ಹೆಸರು : ಶ್ರೀ ಎಂ.ಎ.ಗೋಪಾಲಸ್ವಾಮಿ
(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸ ಬೇಕಾದ ದಿನಾಂಕ : 04.03.2021

ಉತ್ತರಿಸ ಬೇಕಾದ ಸಚಿವರು : ಮಾನ್ಯ ಮುಖ್ಯಮಂತ್ರಿಗಳು

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | 6ನೇ ವೇತನ ಆಯೋಗದ 2ನೇ ಸಂಪುಟದಲ್ಲಿ ಯಾವ ವಿಷಯಗಳ ಬಗ್ಗೆ ಶಿಫಾರಸ್ಸು ಮಾಡಲಾಗಿದೆ; (ವಿವರ ನೀಡುವುದು) | 6ನೇ ರಾಜ್ಯ ವೇತನ ಆಯೋಗವು ತನ್ನ ವರದಿಯ 2ನೇ ಸಂಪುಟದಲ್ಲಿ ಕೆಲವೊಂದು ಇಲಾಖೆಗಳಲ್ಲಿನ ಹುದ್ದೆಗಳ ವೇತನ ಶ್ರೇಣಿಗಳನ್ನು ಮೇಲ್ದರ್ಜೆಗೇರಿಸುವ ಶಿಫಾರಸ್ಸುಗಳೂ ಸೇರಿದಂತೆ ಸರ್ಕಾರದ ವಿವಿಧ ಇಲಾಖೆಗಳ ಕಾರ್ಯಕ್ಷಮತೆಯನ್ನು ಉತ್ತಮಪಡಿಸುವ ನಿಟ್ಟಿನಲ್ಲಿ ಕೆಲವು ಇಲಾಖೆಗಳ ಮತ್ತು ಹುದ್ದೆಗಳ ವಿಲೀನಾತಿ, ಹೊಸ ವೃಂದಗಳ ಸೃಜನೆ ಮುಂತಾದಂತೆ ಸರ್ಕಾರದ ಇಲಾಖೆಗಳ ಮತ್ತು ಸೇವೆಗಳ ಪುನರ್ ರಚನೆ, ಸಿಬ್ಬಂದಿ ನೇಮಕಾತಿ ಪ್ರಾಧಿಕಾರದ ಸ್ಥಾಪನೆ, ತರಬೇತಿ ಕೇಂದ್ರಗಳ ಸ್ಥಾಪನೆ, ಸರ್ಕಾರಿ ನೌಕರರ ಮತ್ತು ಇಲಾಖೆಗಳ ಉತ್ಪಾದಕತೆಯನ್ನು ಹೆಚ್ಚಿಸಲು ಸಾಮರ್ಥ್ಯ ವೃದ್ಧಿ ಮತ್ತು ಪ್ರೋತ್ಸಾಹಕ ಯೋಜನೆಗಳನ್ನು ಅನುಷ್ಠಾನಗೊಳಿಸುವುದು, ಇಲಾಖೆಗಳ ಕಾರ್ಯಸ್ಥಿತಿ, ವಿಧಾನಗಳು ಇತ್ಯಾದಿಗಳ ಸುಧಾರಣೆ, ಮಾನವ ಸಂಪನ್ಮೂಲದ ನಿರ್ವಹಣೆ ಮುಂತಾದ ಆಡಳಿತ ಸುಧಾರಣಾ ವಿಷಯಗಳ ಬಗ್ಗೆ ಶಿಫಾರಸ್ಸು ಮಾಡಿರುತ್ತದೆ. |
| (ಆ) | 2ನೇ ಸಂಪುಟವನ್ನು ಅಧ್ಯಯನ ಮಾಡಲು ರಚಿಸಿರುವ ಅಧಿಕಾರಿಗಳ ಸಮಿತಿಯು ಸಲ್ಲಿಸಿರುವ ಅಧ್ಯಯನ ವರದಿಯ ವಿವರಗಳೇನು; ಈ ವರದಿಯ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳ ಬಗ್ಗೆ ಮಾಹಿತಿ ನೀಡುವುದು; | ವಿವಿಧ ಇಲಾಖೆಗಳ ಕೆಲವೊಂದು ವರ್ಗದ ಹುದ್ದೆಗಳ ವೇತನ ಶ್ರೇಣಿಗಳನ್ನು ಮೇಲ್ದರ್ಜೆಗೇರಿಸುವ ಮತ್ತು ಕೆಲವೊಂದು ವರ್ಗದ ಹುದ್ದೆಗಳಿಗೆ ವಿಶೇಷ ಭತ್ಯೆಗಳನ್ನು ಮಂಜೂರು ಮಾಡುವ ಕುರಿತಾದ ವೇತನ ಆಯೋಗದ 2ನೇ ಸಂಪುಟದಲ್ಲಿನ ವರದಿಯ ಪರಿಶೀಲನೆಯನ್ನು ಅಧಿಕಾರಿ ಸಮಿತಿಗೆ ವಹಿಸಲಾಗಿರುತ್ತದೆ. |
| (ಇ) | ಯಾವ ಕಾಲಮಿತಿಯೊಳಗೆ 2ನೇ ಸಂಪುಟದ ಶಿಫಾರಸ್ಸುಗಳನ್ನು ಜಾರಿಗೊಳಿಸಲಾಗುವುದು?(ಮಾಹಿತಿ ನೀಡುವುದು) | ಪ್ರಸ್ತುತ ಅಧಿಕಾರಿ ಸಮಿತಿಯ ವರದಿಯು ಅಂತಿಮ ಹಂತದಲ್ಲಿದ್ದು, ವರದಿಯು ಸಲ್ಲಿಕೆಯಾದ ಬಳಿಕ ಅದನ್ನು ಪರಿಶೀಲಿಸಿ ಮುಂದಿನ ಕ್ರಮಕೈಗೊಳ್ಳಲಾಗುವುದು.<br><br>ಉಳಿದಂತೆ, ಆಡಳಿತ ಸುಧಾರಣೆಗಳಿಗೆ ಸಂಬಂಧಿಸಿದ ವಿಷಯಗಳನ್ನು ರಾಜ್ಯ ಸಚಿವ ಸಂಪುಟ ಉಪ ಸಮಿತಿ ಮತ್ತು ಇತ್ತೀಚೆಗಷ್ಟೇ ರಚಿಸಲಾಗಿರುವ ಆಡಳಿತ ಸುಧಾರಣಾ ಆಯೋಗದ ಪರಿಶೀಲನೆಯ ವ್ಯಾಪ್ತಿಗೆ ತರಲಾಗಿರುತ್ತದೆ. |

ಸಂ: ಆಇ 7 ಎಸ್‌ಆರ್‌ಪಿ 2021

(ಬಿ.ಎಸ್.ಯಡಿಯೂರಪ್ಪ)
ಮುಖ್ಯಮಂತ್ರಿ